# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2413 (2009)

ಸದಸ್ಯರ ಹೆಸರು : ಶ್ರೀ ಅರವಿಂದ್ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸುವವರು : ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು

ಉತ್ತರಿಸುವ ದಿನಾಂಕ : 22.03.2022

| ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ | ಕರ್ನಾಟಕ ಸರ್ಕಾರದ ಹೊಸ ಕೈಗಾರಿಕಾ ನೀತಿ 2025ರ ಅನ್ವಯ ನಿಗಮದ ವತಿಯಿಂದ ಸ್ಥಾಪಿಸಲ್ಪಟ್ಟಿರುವ ಕೈಗಾರಿಕಾ ವಸಾಹತುಗಳನ್ನು ವಲಯಗಳನ್ನಾಗಿ ವರ್ಗೀಕರಿಸುವುದು ಯಾವ ಉದ್ದೇಶವಾಗಿರುತ್ತದೆ; ಈ ಉದ್ದೇಶದಿಂದ ಆಗಿರುವ ಅಭಿವೃದ್ಧಿ ಏನು; (ವಿವರ ನೀಡುವುದು) | ಕೈಗಾರಿಕಾ ನೀತಿ 2020-25 ರಾಜ್ಯದ ಸಮಗ್ರ ಅಭಿವೃದ್ಧಿ ಹಾಗೂ ಬೆಂಗಳೂರಿನಿಂದ ಹೊರಗಡೆ ಕೈಗಾರಿಕೆಗಳನ್ನು ಕರ್ನಾಟಕದಾದ್ಯಂತ ಟಯರ್-2 ಹಾಗೂ ಟಯರ್-3 ನಗರಗಳಲ್ಲಿ ವಿಸ್ತರಿಸುವ ಧ್ಯೇಯವನ್ನು ಹೊಂದಿರುತ್ತದೆ. ಈ ಉದ್ದೇಶವನ್ನು ಗಮನದಲ್ಲಿಟ್ಟುಕೊಂಡು ಈ ನೀತಿಯಲ್ಲಿ ಹಿಂದುಳಿದಿರುವ ಕೈಗಾರಿಕಾ ಅಭಿವೃದ್ಧಿಯನುಸಾರ ಬಂಡವಾಳ ಹೂಡಿಕೆಗಳಿಗೆ ರಿಯಾಯಿತಿ ಒದಗಿಸಲು ರಾಜ್ಯದ ಜಿಲ್ಲೆಗಳನ್ನು **ಮೂರು ಜೋನ್‌ಗಳನ್ನಾಗಿ** ವಿಂಗಡಿಸಲಾಗಿದೆ. ಜೋನ್-1 ಹಾಗೂ ಜೋನ್-2 ರಡಿ ಕೈಗಾರಿಕಾ ಅಭಿವೃದ್ಧಿಯಲ್ಲಿ ಹಿಂದುಳಿದ ಜಿಲ್ಲೆಗಳು ಸೇರಿರುತ್ತವೆ. ಬೆಂಗಳೂರು ನಗರ ಹಾಗೂ ಗ್ರಾಮಾಂತರ ಜಿಲ್ಲೆಗಳನ್ನು ಜೋನ್-3 ರಲ್ಲಿ ವರ್ಗೀಕರಿಸಲಾಗಿದೆ. |
| ಆ | ಹೊಸ ಕೈಗಾರಿಕಾ ನೀತಿ ಅನ್ವಯ ಎಷ್ಟು ತಾಲ್ಲೂಕುಗಳಲ್ಲಿ ವರ್ಗೀಕರಣ ಮಾಡಲಾಗಿದೆ; ತಾಲ್ಲೂಕುಗಳನ್ನು ಎಷ್ಟು ವಲಯಗಳನ್ನಾಗಿ ಪರಿಷ್ಕರಿಸಲಾಗಿದೆ; | ಕೈಗಾರಿಕಾ ನೀತಿ 2020-25ರಲ್ಲಿ 239 ತಾಲ್ಲೂಕುಗಳನ್ನು ವರ್ಗೀಕರಣ ಮಾಡಲಾಗಿದೆ ಮತ್ತು ರಾಜ್ಯವನ್ನು 3 ವಲಯಗಳನ್ನಾಗಿ ಪರಿಷ್ಕರಿಸಲಾಗಿದೆ. |
| ಇ | ಕೈಗಾರಿಕಾ ಅಭಿವೃದ್ಧಿ ಮತ್ತು ಪ್ರದೇಶದಲ್ಲಿನ ಹಿಂದುಳಿದಿರುವಿಕೆಯ ಆಧಾರದ ಮೇಲೆ ವರ್ಗೀಕರಣವಾರು ಪ್ರತ್ಯೇಕ ಪ್ರೋತ್ಸಾಹ ಮತ್ತು ರಿಯಾಯಿತಿ ನೀಡಲು ಎಷ್ಟು ಅನುದಾನ ನೀಡಲಾಗಿದೆ? | ಕೈಗಾರಿಕಾ ನೀತಿಯನ್ವಯ ಕೈಗಾರಿಕೆಗಳ ಅಭಿವೃದ್ಧಿಯಲ್ಲಿ ಅತ್ಯಂತ ಹಿಂದುಳಿದ ಮತ್ತು ಹಿಂದುಳಿದ ತಾಲ್ಲೂಕುಗಳನ್ನು ಅಭಿವೃದ್ಧಿ ಪಡಿಸುವ ಸಂಬಂಧ 2022-23ನೇ ಸಾಲಿನಲ್ಲಿ ರೂ.1050 ಕೋಟಿ ಅನುದಾನವನ್ನು ರಿಯಾಯಿತಿ ಮತ್ತು ಪ್ರೋತ್ಸಾಹಗಳಿಗೆ ನೀಡಲು ಅವಕಾಶ ಕಲ್ಪಿಸಲಾಗಿದೆ. |

ಸಿಐ 87 ಎಸ್‌ಪಿಐ 2022

(ಡಾ॥ ಮುರುಗೇಶ ಆರ್. ನಿರಾಣಿ)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು